O.S.No. 56.2010 D W - 1

ದಿನಾಂಕ 27.01.2025 ರಂದು ಸಾಕ್ಷಿಯನ್ನು ಕರೆಯಿಸಿ, ಪ್ರಮಾಣ ವಚನ ಬೋಧಿಸಲಾಯಿತು.

ಮುಂದುವರೆದ ಪಾಟೀ ಸವಾಲು : ವಾದಿ ಪರ ವಕೀಲರಿಂದ :

ನಾನು ಡಬಲ್ ಡಿಗ್ರಿ ವ್ಯಾಸಂಗ ಮಾಡಿರುತ್ತೇನೆ. ನನಗೆ ಸಾಮಾನ್ಯ ಕಾನೂನು ತಿಳುವಳಿಕೆ ಇದೆ ಎಂದರೆ ಸರಿ. ದಾವಾ ಸ್ವತ್ತು ಮೂಲತಃ ಚಿಕ್ಕವೀರಯ್ಯನವರ ತಂದೆಗೆ ಸೇರಿತ್ತು. ನನಗೆ ಅವರು ಮಾಡಿದ ದಾವಾ ಸ್ವತ್ತಿನ ವ್ಯವಹಾರಗಳ ಬಗ್ಗೆ ಮಾಹಿತಿ ಇಲ್ಲ. ದಾವಾ ಸ್ವತ್ತನ್ನು 1 ನೇ ಪ್ರತಿವಾದಿ ಚಿಕ್ಕವೀರಯ್ಯನವರಿಂದ ಖರೀದಿಸಿದ್ದರು ಎಂದರೆ ಸಾಕ್ಷಿ ಇರಬಹುದು ಎಂದು ನುಡಿಯುತ್ತಾರೆ. ನನಗೆ ಪ್ರತಿವಾದಿ 2 ಮತ್ತು 4 ರವರು ಮಾತ್ರ ಗೊತ್ತು. ನಾನು ದಾವಾ ಸ್ವತ್ತನ್ನು ಪ್ರತಿವಾದಿ 5 ರವರಿಂದ ಖರೀದಿಸಿದ್ದೇನೆ. 2

ನೇ ಪ್ರತಿವಾದಿ , 5 ನೇ ಪ್ರತಿವಾದಿಗೆ ದಾವಾ ಸ್ವತ್ತನ್ನು ಮಾಡಿಕೊಟ್ಟಿದ್ದರು. 2 ಮತ್ತು 5 ನೇ ಪ್ರತಿವಾದಿಯರ ನಡುವೆ ನಡೆದ ಹಣಕಾಸಿನ ವ್ಯವಹಾರದ ಬಗ್ಗೆ ನನಗೆ ಮಾಹಿತಿ ಇಲ್ಲ. 2 ಮತ್ತು 5 ನೇ ಪ್ರತಿವಾದಿಯರ ನಡುವೆ ದಾವಾ ಸ್ವತ್ತಿಗೆ ಸಂಬಂಧಿಸಿದಂತೆ ದಸ್ತಾವೇಜಿನ ವಹಿವಾಟು ನಡೆದ ಬಗ್ಗೆ ನನಗೆ ಮಾಹಿತಿ ಇದೆ. ಯಾವ ರೀತಿಯ ಪತ್ರ ವ್ಯವಹಾರ ಅವರ ನಡುವೆ ನಡೆದಿದೆ ಎಂದು ನನಗೆ ಮಾಹಿತಿ ಇಲ್ಲ. 5 ನೇ ಪ್ರತಿವಾದಿ ದಾವಾ ಸ್ವತ್ತಿನ ಸ್ವಾಧೀನದಲ್ಲಿ ಇರಲಿಲ್ಲ, ವಾದಿ ಮತ್ತು ಪ್ರತಿವಾದಿ 1 ರಿಂದ 4 ರವರು ದಾವಾ ಸ್ವತ್ತಿನ ಸ್ವಾಧೀನದಲ್ಲಿದ್ದರು ಎಂದರೆ ಸರಿಯಲ್ಲ. 2 ನೇ ಪ್ರತಿವಾದಿಗೆ ದಾವಾ ಸ್ವತ್ತು ಹೇಗೆ ಬಂತು ಎಂದು ನನಗೆ ಮಾಹಿತಿ ಇಲ್ಲ. ದಾವಾ ಸ್ವತ್ತು 2 ನೇ ಪ್ರತಿವಾದಿಗೆ ಬಂದಿಲ್ಲ, ಅವರು 5 ನೇ ಪ್ರತಿವಾದಿಯೊಂದಿಗೆ ಯಾವುದೇ ವ್ಯವಹಾರ ಮಾಡಿಲ್ಲ ಎಂದರೆ ಸರಿಯಲ್ಲ. 2 ನೇ ಪ್ರತಿವಾದಿಗೆ ದಾವಾ ಸ್ವತ್ತನ್ನು ಮಾರಾಟ ಮಾಡುವ ಯಾವುದೇ ಹಕ್ಕಿಲ್ಲ ಎಂದರೆ ಸರಿಯಲ್ಲ. 2 ನೇ ಪ್ರತಿವಾದಿಯ ಹೆಸರಿಗೆ ದಾವಾ ಸ್ವತ್ತಿನ ಯಾವುದೇ ದಾಖಲೆ ಇಲ್ಲ ಎಂದರೆ ಸರಿಯಲ್ಲ.

ದಿನಾಂಕ 12.09.2012 ರಲ್ಲಿ ನಾನು ದಾವಾ ಸ್ವತ್ತನ್ನು ಖರೀದಿಸಿದ್ದೇನೆ. ನಾನು ದಾವಾ ಸ್ವತ್ತನ್ನು ಖರೀದಿಸುವ ಮುಂಚೆ ಎಲ್ಲಾ ದಾಖಲೆಗಳನ್ನು, ಇಸಿ ಮತ್ತು ಉಪ ನೋಂದಾಣಾಧಿಕಾರಿಗಳ ಕಛೇರಿಯಲ್ಲಿನ ದಾಖಲೆಗಳನ್ನು ಪರಿಶೀಲಿಸಿದ್ದೇನೆ. ನಾನು ದಾವಾ ಸ್ವತ್ತಿನ ಬಳಿ ಹೋಗಿ ನೋಡಿ , ಅದರ ಬಗ್ಗೆ ಮಾಹಿತಿ ಪಡೆದು ನಂತರ ದಾವಾ ಸ್ವತ್ತನ್ನು ಖರೀದಿಸಿದ್ದೇನೆ. ನಾನು ದಾವಾ ಸ್ವತ್ತನ್ನು ಖರೀದಿಸುವಾಗ ಆ ಬಗ್ಗೆ ಆ ಸಮಯದಲ್ಲಿ ವಾದಿ ದಾವೆ ಹಾಕಿರುವ ಬಗ್ಗೆ ನನಗೆ ಮಾಹಿತಿ ಇರಲಿಲ್ಲ. ದಾವೆ ಚಾಲ್ತಿಯಲ್ಲಿರುವ ಬಗ್ಗೆ 5 ನೇ ಪ್ರತಿವಾದಿಗೆ ಮಾಹಿತಿ ಇತ್ತು ಎಂದರೆ ಸಾಕ್ಷಿ ಇರಬಹುದು ಎಂದು ನುಡಿಯುತ್ತಾರೆ. ನಾನು ದಾವಾ ಸ್ವತ್ತನ್ನು ಖರೀದಿಸದೇ ಇರಬಹುದು ಎಂಬ ಕಾರಣದಿಂದ 5 ನೇ ಪ್ರತಿವಾದಿ ನನಗೆ ದಾವೆಯ ಬಗ್ಗೆ ಮಾಹಿತಿ ನೀಡಿಲ್ಲ ಎಂದರೆ ಸರಿಯಲ್ಲ. 5 ನೇ ಪ್ರತಿವಾದಿಯ ಹೆಸರಿನಲ್ಲಿ ದಾವಾ ಸ್ವತ್ತು ಇದ್ದ ಬಗ್ಗೆ ದಾಖಲೆಗಳನ್ನು ನ್ಯಾಯಾಲಯದಲ್ಲಿ ನೀಡಿದ್ದೇನೆ. ಮುಂದುವರೆದು ಸಾಕ್ಷಿ ಅವರ ದಾಖಲೆಗಳು ನನ್ನ ಬಳಿ ಇಲ್ಲ ಅವುಗಳನ್ನು ಹಾಜರುಪಡಿಸಿಲ್ಲ ಎಂದು ನುಡಿಯುತ್ತಾರೆ. 5 ನೇ ಪ್ರತಿವಾದಿ ಹಾಗೂ ಅವರ ಕುಟುಂಬಸ್ಥರು ದಾವಾ ಸ್ವತ್ತಿನ ಸ್ವಾಧೀನದಲ್ಲಿ ಇರಲಿಲ್ಲ ಎಂದರೆ ಸರಿಯಲ್ಲ.

ದಾವಾ ಸ್ವತ್ತನ್ನು ಅಜ್ಜಿ ಮೊಮ್ಮಗನಿಗೆ ದಾನ ಮಾಡಿರುವ ಬಗ್ಗೆ ನನಗೆ ಮಾಹಿತಿ ಇದೆ, ದಿನಾಂಕ ನೆನಪಿಲ್ಲ. ನಾನು ದಾನ ಪತ್ರವನ್ನು ನೋಡಿದ್ದೇನೆ. ನ್ಯಾಯಾಲಯದಲ್ಲಿ ಹಾಜರುಪಡಿಸಿದ್ದೇನೆ. ನಾನು ಯಾವುದೇ ದಾನಪತ್ರವನ್ನು ನೋಡಿಲ್ಲ, ನ್ಯಾಯಾಲಯದಲ್ಲಿ ಅದನ್ನು ಹಾಜರಪಡಿಸಿಲ್ಲ ಎಂದರೆ ಸರಿಯಲ್ಲ. 1 ನೇ ಪ್ರತಿವಾದಿ 3 ನೇ ಪ್ರತಿವಾದಿಗೆ ದಾನ ಮಾಡಿಕೊಡಲು ಯಾವುದೇ ಹಕ್ಕು ಹಿತಾಸಕ್ತಿ ದಾವಾ ಸ್ವತ್ತಿನಲ್ಲಿ ಇರಲಿಲ್ಲ ಎಂದರೆ ಸರಿಯಲ್ಲ. ದಾನಪತ್ರ ದ ಆಧಾರದ ಮೇಲೆ ನಾನು ಆ ಬಗ್ಗೆ ಹೇಳಿದ್ದೇನೆ. ದಾವಾ ಸ್ವತ್ತು 1 ನೇ ಪ್ರತಿವಾದಿಯ ಪಿತ್ರಾರ್ಜಿತ ಸ್ವತ್ತಾಗಿದ್ದು ಅವರಿಗೆ ಯಾವುದೇ ದಾನ ಬರೆಯುವ ಹಕ್ಕಿರಲಿಲ್ಲ ಎಂದರೆ ಸರಿಯಲ್ಲ.

1 ನೇ ಪ್ರತಿವಾದಿ ಯ ಇರುವಿಕೆಯ ಬಗ್ಗೆ ನನಗೆ ಮಾಹಿತಿ ಇಲ್ಲ. 1 ನೇ ಪ್ರತಿವಾದಿ ಅವಿದ್ಯಾವಂತರು , ಅವರಿಗೆ ವಯಸ್ಸಾಗಿದೆ ಎಂದರೆ ಗೊತ್ತಿಲ್ಲ. 2 ರಿಂದ 4 ನೇ ಪ್ರತಿವಾದಿಯರು, 1 ನೇ ಪ್ರತಿವಾದಿಗೆ ಮೋಸ ಮಾಡುವ ಉದ್ದೇಶದಿಂದ ಸುಳ್ಳು ದಾನ ಪತ್ರವನ್ನು ಮಾಡಿದ್ದಾರೆ ಎಂದರೆ ಸರಿಯಲ್ಲ. ವಾದಿಗೆ ನಾಲ್ಕನೇಯ ಒಂದು ಭಾಗ ವನ್ನು ಕೊಡಬೇಕಾಗುತ್ತದೆ ಎಂದು ದಾನಪತ್ರವನ್ನು ಸೃಷ್ಟಿಸಿಕೊಂಡಿದ್ದಾರೆ ಎಂದರೆ ಗೊತ್ತಿಲ್ಲ. ದಾವಾ ಸ್ವತ್ತಿನ ಸ್ವಾಧೀನದಲ್ಲಿ ವಾದಿ ಮತ್ತು 1 ರಿಂದ 4 ನೇ ಪ್ರತಿವಾದಿಗಳು ಇದ್ದಾರೆ ಎಂದರೆ ಸರಿಯಲ್ಲ. ವಾದಿಯನ್ನು ದಾವಾ ಸ್ವತ್ತಿನಿಂದ ಹೊರಗೆ ಹಾಕಲು ನಾನು 2, 3 ಮತ್ತು 5 ನೇ ಪ್ರತಿವಾದಿಯರು ಪ್ರಯತ್ನಿಸುತ್ತಿದ್ದೇವೆ ಎಂದರೆ ಸರಿಯಲ್ಲ. ದುರುದ್ದೇಶದಿಂದ ನಾನು ಮತ್ತು ಇತರೆ ಪ್ರತಿವಾದಿಯರು ವಾದಿಗೆ ತೊಂದರೆ ಕೊಡುತ್ತಿದ್ದೇವೆ ಎಂದರೆ ಸರಿಯಲ್ಲ. ದಾವಾ ಸ್ವತ್ತಿನಲ್ಲಿ ವಾದಿಗೆ ಭಾಗ ಇದೆ ಎಂದು ಗೊತ್ತಿದ್ದರೂ ಸಹ ನಾನು 2, 3 ಮತ್ತು 5 ನೇ ಪ್ರತಿವಾದಿಗಳ ಜೊತೆ ಸೇರಿಕೊಂಡು ಸುಳ್ಳು ಕ್ರಯ ಪತ್ರವನ್ನು ಸೃಷ್ಟಿಸಿದ್ದೇನೆ ಎಂದರೆ ಸರಿಯಲ್ಲ. ನಾನು ದಾವಾ ಸ್ವತ್ತಿನ ಸ್ವಾಧೀನದಲ್ಲಿ ಇಲ್ಲ, ವಾದಿಯೇ ದಾವಾ ಸ್ವತ್ತಿನ ಸ್ವಾಧೀನದಲ್ಲಿ ಇದ್ದಾರೆ ಎಂದರೆ ಸರಿಯಲ್ಲ. ನಾನು ದಾವಾ ಸ್ವತ್ತಿನ ಸ್ವಾಧೀನದಲ್ಲಿರುವುದಕ್ಕೆ ದಾಖಲೆಗಳನ್ನು ನ್ಯಾಯಾಲಯದಲ್ಲಿ ನೀಡಿದ್ದೇನೆ. ನಾನು ಯಾವುದೇ ದಾಖಲೆಗಳನ್ನು ನೀಡಿಲ್ಲ, ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ದಾವಾ ಸ್ವತ್ತನ್ನು ಮಾರಾಟ ಮಾಡಲು 2 ನೇ ಪ್ರತಿವಾದಿಗೆ ಯಾವುದೇ ಹಕ್ಕು ಇರಲಿಲ್ಲ ಎಂದರೆ ಸರಿಯಲ್ಲ. ದಾವಾ ಸ್ವತ್ತು ಪಿತ್ರಾರ್ಜಿತ ಸ್ವತ್ತಾದ ಕಾರಣ 1 ನೇ ಪ್ರತಿವಾದಿಗೆ ಯಾವುದೇ ದಾನ ಪತ್ರ ಮಾಡಿಕೊಡುವ ಹಕ್ಕು ಇರಲಿಲ್ಲ ಎಂದರೆ ಸರಿಯಲ್ಲ. ನನಗೆ ದಾವಾ ಸ್ವತ್ತಿನ ಬಗ್ಗೆ

ಯಾವುದೇ ಮಾಹಿತಿ ಇಲ್ಲದಿದ್ದರೂ ಸಹ ವಾದಿಗೆ ತೊಂದರೆ ಕೊಡಲು 5 ನೇ ಪ್ರತಿವಾದಿಯ ಜೊತೆ ಸೇರಿ ಕ್ರಯ ಪತ್ರ ಸೃಷ್ಟಿಸಿದ್ದೇನೆ ಎಂದರೆ ಸರಿಯಲ್ಲ. ರಾಮನಗರ ಉಪ ವಿಭಾಗಾಧಿಕಾರಿಗಳ ಮುಂದೆ ವಾದಿಯವರು 3 ನೇ ಪ್ರತಿವಾದಿಗೆ ದಾನ ಪತ್ರದ ಆಧಾರದ ಮೇಲೆ ಆದ ಖಾತೆಯನ್ನು ಪ್ರಶ್ನಿಸಿ ಹಾಕಿದ್ದ ಪ್ರಕರಣದ ಬಗ್ಗೆ ನನಗೆ ಮಾಹಿತಿ ಇಲ್ಲ. 1 ಮತ್ತು 4 ನೇ ಪ್ರತಿವಾದಿ ಓ. ಎಸ್. 563.2006 ರಂತೆ ಹಿರಿಯ ಶ್ರೇಣಿ ನ್ಯಾಯಾಲಯದಲ್ಲಿ ದಾವಾ ಸ್ವತ್ತಿಗೆ ಸಂಬಂಧಿಸಿದಂತೆ ಹಾಕಿರುವ ದಾವೆಯ ಬಗ್ಗೆ ನನಗೆ ಮಾಹಿತಿ ಇಲ್ಲ. ಸದರಿ ದಾವೆಗಳು ಇರುವ ವಿಚಾರ ಗೊತ್ತಿದ್ದರೂ ಸಹ ಸುಳ್ಳು ಕ್ರಯ ಪತ್ರವನ್ನು ಸೃಷ್ಟಿಸಿದ್ದೇವೆ ಎಂದರೆ ಸರಿಯಲ್ಲ. ವಾದಿಗೆ ದಾವಾ ಸ್ವತ್ತಿನಲ್ಲಿ 3 ನೇ ಒಂದು ಭಾಗ ಹಕ್ಕಿದೆ ಎಂದರೆ ಸರಿಯಲ್ಲ. ನಾನು ಹಾಜರುಪಡಿಸಿರುವ ದಾಖಲೆಗಳು ಈ ದಾವೆಗಾಗಿ ಸೃಷ್ಟಿಸಲಾಗಿರುವ ದಾಖಲೆಗಳು ಎಂದರೆ ಸರಿಯಲ್ಲ.

<u>ಪಾಟೀ ಸವಾಲು ಮುಗಿಯಿತು.</u>

<u>ಮರು ವಿಚಾರಣೆ ಇಲ್ಲ.</u>

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನವನ್ನು ಗಣಕೀಕರಣ ಮಾಡಲಾಯಿತು)

ಓ ಹೇ ಕೇ ಸ ಒ

ಎರಡನೇ ಅಪರ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ, ಕನಕಪುರ